# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1082 |
| ಸದಸ್ಯರ ಹೆಸರು | : | ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | 18.12.2024 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳ, ಉಪ ವಿಭಾಗಾಧಿಕಾರಿಗಳ ಮತ್ತು ತಹಶೀಲ್ದಾರ್ ರವರುಗಳ ನ್ಯಾಯಾಲಯಗಳಲ್ಲಿ ಭೂ ಇತ್ಯರ್ಥಕ್ಕೆ ಹಾಗೂ ಇನ್ನಿತರೆ ವ್ಯವಹಾರಗಳಿಗೆ ಸಂಬಂಧಿಸಿದಂತೆ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು) | ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿ, ಉಪ ವಿಭಾಗಾಧಿಕಾರಿ ಮತ್ತು ತಹಶೀಲ್ದಾರ್ ನ್ಯಾಯಾಲಯಗಳಿಗೆ ಸಂಬಂಧಿಸಿದ ಕಳೆದ ಮೂರು ವರ್ಷಗಳಲ್ಲಿನ ಪ್ರಕರಣಗಳ ತಾಲ್ಲೂಕುವಾರು ವಿವರಗಳು ಕೆಳಕಂಡಂತಿವೆ: |
| (ಆ) | ಕಳೆದ 3 ವರ್ಷಗಳಲ್ಲಿ ಈ ನ್ಯಾಯಾಲಯಗಳಲ್ಲಿ ಇದುವರೆವಿಗೂ ಇತ್ಯರ್ಥವಾಗಿರುವ ಮತ್ತು ಇತ್ಯರ್ಥವಾಗದೆ ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) | (see table below) |

| ಕ್ರ. ಸಂ | ನ್ಯಾಯಾಲಯ | ದಾಖಲಾದ ಪ್ರಕರಣಗಳ ಸಂಖ್ಯೆ | ಇತ್ಯರ್ಥ ವಾಗಿರುವ ಪ್ರಕರಣಗಳ ಸಂಖ್ಯೆ | ಬಾಕಿ ಇರುವ ಪ್ರಕರಣಗಳ ಸಂಖ್ಯೆ |
|---|---|---|---|---|
| 1. | ಜಿಲ್ಲಾಧಿಕಾರಿ | 1498 | 336 | 912 |
| 2. | ಉಪ ವಿಭಾಗಾಧಿಕಾರಿ, ಮಂಡ್ಯ ಉಪ ವಿಭಾಗ | 3474 | 414 | 3060 |
| 3. | ಉಪ ವಿಭಾಗಾಧಿಕಾರಿ, ಪಾಂಡವಪುರ ಉಪ ವಿಭಾಗ | 4504 | 429 | 4075 |
| 4. | ತಹಶೀಲ್ದಾರ್, ಮಂಡ್ಯ | 3821 | 52 | 3821 |
| 5. | ತಹಶೀಲ್ದಾರ್, ಮದ್ದೂರು | 3063 | 81 | 2982 |
| 6. | ತಹಶೀಲ್ದಾರ್, ಮಳವಳ್ಳಿ | 2199 | 51 | 2199 |
| 7. | ತಹಶೀಲ್ದಾರ್, ಪಾಂಡವಪುರ | 1114 | 58 | 1056 |
| 8. | ತಹಶೀಲ್ದಾರ್, ಶ್ರೀರಂಗಪಟ್ಟಣ | 778 | 42 | 737 |
| 9. | ತಹಶೀಲ್ದಾರ್, ಕೆ.ಆರ್. ಪೇಟೆ | 786 | 32 | 818 |
| 10. | ತಹಶೀಲ್ದಾರ್, ನಾಗಮಂಗಲ | 743 | 39 | 704 |
| | **ಒಟ್ಟು** | **21980** | **1534** | **20364** |

ಮೂರು ವರ್ಷಗಳ ಅವಧಿಗೂ ಮೀರಿ ಇತ್ಯರ್ಥವಾಗದೇ ಬಾಕಿ ಇರುವ ಪ್ರಕರಣಗಳು ಯಾವುದೂ ಇರುವುದಿಲ್ಲ.

| | | |
|---|---|---|
| ಇ) | ಕಳೆದ 3 ವರ್ಷಗಳಿಂದ ಇತ್ಯರ್ಥವಾಗದೆ ಉಳಿದಿರುವ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? ಯಾವ ಕಾಲಮಿತಿಯೊಳಗೆ ಇತ್ಯರ್ಥ ಪಡಿಸಲಾಗುವುದು? (ವಿವರಗಳನ್ನು ನೀಡುವುದು) | ಕಂದಾಯ ನ್ಯಾಯಾಲಯಗಳಲ್ಲಿನ ಪ್ರಕರಣಗಳ ಇತ್ಯರ್ಥಕ್ಕೆ ಸಂಬಂಧಿಸಿದಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 193 ಟಿಆರ್‌ಎಂ 2019, ದಿನಾಂಕ:18.02.2021ರಲ್ಲಿ ಹೊರಡಿಸಿರುವ ಮಾರ್ಗಸೂಚಿಗಳನ್ವಯ ಆಸ್ತಿಯ ಹಕ್ಕಿನ ಹೊರತಾದ ವಿವಾದಿತ ಪ್ರಕರಣಗಳನ್ನು ತಹಶೀಲ್ದಾರ್‌ರವರು ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 129ರಡಿ ಮೂರು (3) ತಿಂಗಳೊಳಗೆ ಇತ್ಯರ್ಥಪಡಿಸುವಂತೆ ಹಾಗೂ ಸದರಿ ಕಾಯ್ದೆಯ ಕಲಂ 136(2) ಹಾಗೂ 136(3)ರ (ಅಪೀಲು/ಪುನರೀಕ್ಷಣ) ಅಡಿಯಲ್ಲಿ ಕ್ರಮವಾಗಿ ಉಪ ವಿಭಾಗಾಧಿಕಾರಿ ಮತ್ತು ಜಿಲ್ಲಾಧಿಕಾರಿಗಳ ನ್ಯಾಯಾಲಯಗಳಲ್ಲಿ ದಾಖಲಾಗುವ ಮೇಲ್ಮನವಿ ಪ್ರಕರಣಗಳನ್ನು ಎದುರುದಾರರಿಗೆ ನೋಟೀಸು ನೀಡಿದ ದಿನದಿಂದ ಆರು (06) ತಿಂಗಳ ಒಳಗಾಗಿ ಇತ್ಯರ್ಥಪಡಿಸುವಂತೆ ಕಾಲಮಿತಿ ನಿಗದಿಪಡಿಸಿದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 17 ಟಿಆರ್‌ಎಂ 2021, ದಿನಾಂಕ:22.02.2021ರ ಹಾಗೂ ಸುತ್ತೋಲೆ ಸಂಖ್ಯೆ:ಕಂಇ 118 ಟಿಆರ್‌ಎಂ 2023 (ಭಾ-1), ದಿನಾಂಕ:26.08.2024ರಲ್ಲಿ ವಾರದ ಪ್ರತಿ ಮಂಗಳವಾರ, ಗುರುವಾರಗಳ ಜೊತೆಗೆ ಮತ್ತೊಂದು ಸೂಕ್ತ ದಿನವನ್ನು ಸೇರಿಸಿಕೊಂಡು ಒಟ್ಟು 3 ದಿನಗಳು ಕಡ್ಡಾಯವಾಗಿ ಕಂದಾಯ ಅರೆ ನ್ಯಾಯಿಕ ಪ್ರಕರಣಗಳ ವಿಚಾರಣೆ ನಡೆಸಿ, ಪ್ರಕರಣಗಳ ಶೀಘ್ರ ವಿಲೇವಾರಿ ಮಾಡಲು ಹಲವು ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಲಾಗಿದೆ.<br><br>ಸರ್ಕಾರದ ಅಧಿಸೂಚನೆ ಸಂ:ಕಂಇ 86 ಟಿಆರ್‌ಎಂ 2022, ದಿನಾಂಕ:13.4.2022ರ ಅಧಿಸೂಚನೆಯಲ್ಲಿ ಹಕ್ಕು ಬದಲಾವಣೆಗಳ ಸಂಬಂಧ (ಬಾಕಿ ಇರುವ ಪ್ರಕರಣಗಳು ಸೇರಿ) ತಕರಾರು ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸುವ ದೃಷ್ಟಿಯಿಂದ ಹೋಬಳಿಗಳಲ್ಲಿ ಕಾರ್ಯನಿರ್ವಹಿಸುವ ಉಪ ತಹಶೀಲ್ದಾರ್ ಹುದ್ದೆಯು ಶಿರಸ್ತೇದಾರ್ ಹುದ್ದೆಗೆ ಸಮಾನಾಂತರವಾಗಿರುವುದರಿಂದ ಸಂಬಂಧಪಟ್ಟ ಹೋಬಳಿಯ ವ್ಯಾಪ್ತಿಯಲ್ಲಿ ಬರುವ ಪ್ರಕರಣಗಳನ್ನು ಆಯಾ ಉಪ ತಹಶೀಲ್ದಾರ್ ರವರುಗಳು ಹಾಗೂ ಕಸಬಾ ಹೋಬಳಿಯ ಪ್ರಕರಣಗಳನ್ನು ತಹಶೀಲ್ದಾರ್‌ರವರು ಇತ್ಯರ್ಥಪಡಿಸಲು ನಿರ್ದೇಶನ ನೀಡಲಾಗಿದೆ.<br><br>ಹೆಚ್ಚು ಪ್ರಕರಣಗಳು ಬಾಕಿ ಇರುವ ಜಿಲ್ಲೆಗಳಲ್ಲಿನ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಮೇಲ್ಮನವಿ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸುವ ದೃಷ್ಟಿಯಿಂದ ಉಪ ವಿಭಾಗಾಧಿಕಾರಿ ವೃಂದಕ್ಕೆ ಸಮಾನಾಂತರವಾದ ವೃಂದದ ಇತರೆ ಅಧಿಕಾರಿಗಳಿಗೆ ಕಾರ್ಯಹಂಚಿಕೆ ಮಾಡಿ ದಿನಾಂಕ:10.01.2024, 25.01.2024, 01.04.2024 ಮತ್ತು 10.09.2024ಗಳಂದು ಅಧಿಸೂಚನೆಗಳನ್ನು ಹೊರಡಿಸಲಾಗಿರುತ್ತದೆ.<br><br>ಪ್ರತಿ ತಿಂಗಳು ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ನಡೆಯುವ ಪ್ರಗತಿ ಪರಿಶೀಲನಾ ಸಭೆಯಲ್ಲಿ ನ್ಯಾಯಾಲಯ ಪ್ರಕರಣಗಳ ವಿಲೇವಾರಿ ಕುರಿತು ಪರಿಶೀಲನೆ ನಡೆಸಿ, ಶೀಘ್ರವಾಗಿ ವಿಲೇವಾರಿ ಮಾಡಲು ಸೂಕ್ತ ನಿರ್ದೇಶನಗಳನ್ನು ನೀಡಲಾಗುತ್ತಿದೆ. |

**ಸಂ: ಕಂಇ 266 ಟಿಆರ್‌ಎಂ 2024**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು